**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 339/2020

**ಪಿರ್ಯಾದಿ** : ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

**- ವಿರುದ್ಧ -**

**ಆರೋಪಿ/ತರು:**

1) ತಿಪ್ಪೇಶ ಬಿನ್ ಹನುಮಂತಪ್ಪ, 40 ವರ್ಷ,
2) ಓಂಕಾರಪ್ಪ ಬಿನ್ ನಂಜುಂಡಪ್ಪ, 42 ವರ್ಷ,
3) ಮಂಜುನಾಥ ಬಿನ್ ಕದ್ಲಪ್ಪ, 38 ವರ್ಷ,

ಎಲ್ಲರೂ ವಾಸ : ಗೋಪಾಲಭೂಸೇನಹಳ್ಳಿ ಗ್ರಾಮ, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

****

**-:ದೋಷಾರೋಪಣೆ:-**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆ:-

ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ ಗೋಪಾಲ ಗ್ರಾಮದ ವಾಸಿಗಳಾದ ಚಾಸಾ-1 ಶಾರದ ಮತ್ತು 1 ನೇ ಆರೋಪಿಯಾದ ನೀವು ಗಂಡ ಹೆಂಡತಿಯರಾಗಿದ್ದು, ಮದುವೆಯ ನಂತರದ ದಿನಗಳಲ್ಲಿ 1 ನೇ ಆರೋಪಿಯಾದ ನೀವು ಚಾಸಾ-1 ರವರ ಮೇಲೆ ಅನುಮಾನಪಟ್ಟು ಮಾನಸಿಕವಾಗಿ ಮತ್ತು ದೈಹಿಕವಾಗಿ ತೊಂದರೆ ನೀಡುತ್ತಿದ್ದು, ದಿನಾಂಕ 27.07.2019 ರಂದು ರಾತ್ರಿ 09.00 ಗಂಟೆ ಸಮಯದಲ್ಲಿ ಚಾಸಾ-1 ರವರು ಗ್ರಾಮದ ಗುರುರವರ ಅಂಗಡಿಗೆ ದಿನಸಿ ಸಾಮಾಗ್ರಿ ತರಲು ಹೋಗಿ ವಾಪಸ್ಸು ಬರುತ್ತಿರುವಾಗ 3 ನೇ ಆರೋಪಿಯಾದ ನೀವು ನೋಡಿ 1 ನೇ ಆರೋಪಿಯಾದ ನಿಮಗೆ ಚಾಸಾ-1 ರವರು ಗುರುರವರೊಂದಿಗೆ ಅನೈತಿಕ ಸಂಬಂಧವಿಟ್ಟು ಕೊಂಡಿರುತ್ತಾರೆಂದು ಹೇಳಿದಾಗ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಮಾನಸಿಕವಾಗಿ ಮತ್ತು ದೈಹಿಕವಾಗಿ ಹಿಂಸೆಯನ್ನು ನೀಡಿದ್ದು, ನಂತರ ದಿನಾಂಕ 30.07.2019 ರಂದು ಬೆಳಿಗ್ಗೆ 08.30 ಗಂಟೆ ಸಮಯದಲ್ಲಿ ಗೋಪಾಲ ಗ್ರಾಮದಿಂದ ಸಿದ್ಲಿಪುರ ರಸ್ತೆಯ ಪ್ರೇಮರವರ ಮನೆಯ ಪಕ್ಕದ ರಸ್ತೆಯಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಹಲ್ಲೆ ಮಾಡಿ

ಮಾನಸಿಕವಾಗಿ ಮತ್ತು ದೈಹಿಕವಾಗಿ ಹಿಂಸೆ ನೀಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 498(ಎ) ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ ದಿನಾಂಕ 27.07.2019 ರಂದು ರಾತ್ರಿ 09.00 ಗಂಟೆ ಸಮಯದಲ್ಲಿ ಚಾಸಾ-1 ರವರು ಗ್ರಾಮದ ಗುರುರವರ ಅಂಗಡಿಗೆ ದಿನಸಿ ಸಾಮಾಗ್ರಿ ತರಲು ಹೋಗಿ ವಾಪಸ್ಸು ಬರುತ್ತಿರುವಾಗ 3 ನೇ ಆರೋಪಿಯಾದ ನೀವು ನೋಡಿ 1 ನೇ ಆರೋಪಿಯಾದ ನಿಮಗೆ ಚಾಸಾ-1 ರವರು ಗುರುರವರೊಂದಿಗೆ ಅನೈತಿಕ ಸಂಬಂಧವಿಟ್ಟು ಕೊಂಡಿರುತ್ತಾರೆಂದು ಹೇಳಿದಾಗ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ನಂತರ ದಿನಾಂಕ 30.07.2019 ರಂದು ಬೆಳಿಗ್ಗೆ 08.30 ಗಂಟೆ ಸಮಯದಲ್ಲಿ ಗೋಪಾಲ ಗ್ರಾಮದಿಂದ ಸಿದ್ಲಿಪುರ ರಸ್ತೆಯ ಪ್ರೇಮರವರ ಮನೆಯ ಪಕ್ಕದ ರಸ್ತೆಯಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಬಿಡಿಸಲು ಬಂದ ಚಾಸಾ-4 ರಂಜಿತರವರಿಗೂ ಸಹ ಆರೋಪಿತರಾದ ನೀವು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ ದಿನಾಂಕ 30.07.2019 ರಂದು ಬೆಳಿಗ್ಗೆ 08.30 ಗಂಟೆ ಸಮಯದಲ್ಲಿ ಗೋಪಾಲ ಗ್ರಾಮದಿಂದ ಸಿದ್ಲಿಪುರ ರಸ್ತೆಯ ಪ್ರೇಮರವರ ಮನೆಯ ಪಕ್ಕದ ರಸ್ತೆಯಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಕೈಗಳಿಂದ ಚಾಸಾ-1 ಮತ್ತು 4 ರವರ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ದೊಣ್ಣೆಯಿಂದ ಚಾಸಾ-1 ಮತ್ತು 4 ರವರ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರನ್ನು ಹಿಡಿದು ಎಳೆದಾಡಿ ಬಟ್ಟೆ ಬರೆಗಳನ್ನು ಹರಿದು ಹಾಕಿ ಚಾಸಾ-1 ರವರ ಮಾನಕ್ಕೆ ಧಕ್ಕೆಯನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ

ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ : 14.11.2022

**ಸಹಿ**
**(ಶಿವಕುಮಾರ್.ಆರ್.)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**